## ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 218 ಟಿಎನ್ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:29-04-2020

**ರವರಿಂದ**

ಸರ್ಕಾರದ ಮುಖ್ಯ ಕಾರ್ಯದರ್ಶಿ
ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು,
ವಿಧಾನ ಸೌಧ, ಬೆಂಗಳೂರು

**ರವರಿಗೆ**

1. ಪೋಲೀಸ್ ಆಯುಕ್ತರು, ಬೆಂಗಳೂರು ನಗರ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ, ಉಡುಪಿ, ಮಂಗಳೂರು, ಶಿವಮೊಗ್ಗ, ಬೆಳಗಾವಿ, ಗದಗ, ಉತ್ತರ ಕನ್ನಡ ಜಿಲ್ಲೆಗಳು.

**ಮಾನ್ಯರೆ,**

**ವಿಷಯ:** 2020-21ನೇ ಸಾಲಿಗೆ 1ನೇ ತರಗತಿಯಿಂದ 12ನೇ ತರಗತಿಯವರಿಗೆ ಪಠ್ಯಪುಸ್ತಕಗಳನ್ನು ಮುದ್ರಿಸಿ ಸರಬರಾಜು ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಅ.ಸ.ಪತ್ರ ಸಂ.ಪ್ರಕಾ/ಪ್ರಾ&ಪ್ರೌ/71/2020, ದಿ.23.04.2020

-0-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯಾದ್ಯಂತ ಕೋವಿಡ್-19 ಸೋಂಕನ್ನು ತಡೆಗಟ್ಟಲು ಸರ್ಕಾರವು ಕಾಲಕಾಲಕ್ಕೆ ಕಟ್ಟುನಿಟ್ಟಿನ ಕ್ರಮಗಳನ್ನು ಸಂಬಂಧಪಟ್ಟ ಇಲಾಖೆಗಳ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಿದೆ.

ಉಲ್ಲೇಖಿತ ಪತ್ರದಲ್ಲಿ ಪಠ್ಯಪುಸ್ತಕಗಳು ಮತ್ತು ಇತರೆ ಕಲಿಕಾ ಸಾಮಾಗ್ರಿಗಳನ್ನು ವಿದ್ಯಾರ್ಥಿಗಳಿಗೆ ಮೇ 2020ರ ಅಂತ್ಯಕ್ಕೆ ವಿತರಿಸಬೇಕಾಗಿತ್ತು. ಆದರೆ, ಕೋವಿಡ್-19ರ ಮಾರ್ಗಸೂಚಿಯಂತೆ ಲಾಕ್ ಡೌನ್ ವಿಧಿಸಿರುವುದರಿಂದ ಪಠ್ಯಪುಸ್ತಕ ಮತ್ತು ಇತರೆ ಕಲಿಕಾ ಸಾಮಾಗ್ರಿಗಳು, ಮುದ್ರಣ ಮತ್ತು ಸರಬರಾಜು ಕಾರ್ಯವು ಸ್ಥಗಿತಗೊಂಡಿರುತ್ತದೆ. ಇದರಿಂದ ನಿಗದಿತ ಸಮಯದಲ್ಲಿ ಪಠ್ಯಪುಸ್ತಕ ಮತ್ತು ಇತರೆ ಕಲಿಕಾ ಸಾಮಾಗ್ರಿಗಳನ್ನು ಸಕಾಲದಲ್ಲಿ ವಿತರಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ ಮುದ್ರಕರು ಮತ್ತು ಸರಬರಾಜುಗಾರರಿಗೆ ಪಠ್ಯಪುಸ್ತಕ ಮತ್ತು ಇತರೆ ಕಲಿಕಾ ಸಾಮಾಗ್ರಿಗಳನ್ನು ಮುದ್ರಿಸಲು ಕರ್ನಾಟಕ ಕ್ರೋಢಿಕೃತ ಮಾರ್ಗಸೂಚಿಗಳಲ್ಲಿ ಅನುಮತಿ ನೀಡುವಂತೆ ಕೋರಿರುತ್ತಾರೆ.

ಶೈಕ್ಷಣಿಕ ಆದ್ಯತೆ ಮೇರೆಗೆ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಪಠ್ಯಪುಸ್ತಕಗಳನ್ನು ಒದಗಿಸುವುದು ಅವಶ್ಯಕವಾಗಿರುವ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವಂತಹ 1ನೇ ತರಗತಿಯಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಮತ್ತು ಇತರೆ ಕಲಿಕಾ ಸಾಮಾಗ್ರಿಗಳನ್ನು ಮುದ್ರಿಸಲು ಮುದ್ರಕರಿಗೆ ಮತ್ತು ಅವರ ಸಿಬ್ಬಂದಿಗೆ ಪಾಸ್ ಗಳನ್ನು ಕರ್ನಾಟಕ ಕ್ರೋಢಿಕೃತ ಮಾರ್ಗಸೂಚಿಯ Standard Operating Procedure (SOP)ನ್ವಯ ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಕಾರ್ಯನಿರ್ವಹಿಸುವ ಷರತ್ತಿಗೊಳಪಟ್ಟು ಅನುಮತಿಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ದೃಢೀಕರಣದ ಮೇರೆಗೆ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

ತಮ್ಮ ನಂಬುಗೆಯ,

**(ಟಿ.ಕೆ.ಅನಿಲ್ ಕುಮಾರ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಸದಸ್ಯ ಕಾರ್ಯದರ್ಶಿ

**ಪ್ರತಿ ಮಾಹಿತಿಗಾಗಿ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು